**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 402 ಗ್ರಾಪಂಕಾ 2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 03-03-2014

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ತುರ್ತು**

ಇವರಿಗೆ:

ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ,

ಮಾನ್ಯರೆ,

**ವಿಷಯ:** ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸುವ ಬಗ್ಗೆ.

**ಉಲ್ಲೇಖ:** 1. ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರ ಸಂಖ್ಯೆ: E(2) 611/13-14/PSC ದಿನಾಂಕ:30-10-2013.
2. ಸರ್ಕಾರದ ಇದೇ ಸಮಸಂಖ್ಯೆಯ ಪತ್ರ ದಿನಾಂಕ:07-11-2013

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳ ಕಡೆ ತಮ್ಮ ಗಮನ ಸೆಳೆಯಲಾಗಿದೆ.

ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಆಯ್ಕೆ ಪಟ್ಟಿಯನ್ನು ತಮಗೆ ಅಧಿಕೃತವಾಗಿ ಕರ್ನಾಟಕ ಲೋಕ ಸೇವಾ ಆಯೋಗವು ಕಳುಹಿಸಿದ್ದು, ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಬೇಕಾಗಿರುವುದರಿಂದ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ತುರ್ತಾಗಿ ಭರ್ತಿ ಮಾಡಬೇಕಾಗಿರುವುದು ಅತ್ಯವಶ್ಯಕವಾಗಿರುತ್ತದೆ. ಆದಕಾರಣ ಈ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977 ರ ಅನುಸಾರ ಜರೂರಾಗಿ ನೇಮಕಾತಿ ಆದೇಶ ಹೊರಡಿಸಲು ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಕೋರಲಾಗಿತ್ತು.

ಆದುದರಿಂದ ಮುಖ್ಯ ಪಟ್ಟಿಯಲ್ಲಿನ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇದ್ದಲ್ಲಿ ಹೆಚ್ಚುವರಿ ಪಟ್ಟಿಯನ್ನು 6 ತಿಂಗಳೊಳಗಾಗಿ ಸಿದ್ಧಪಡಿಸಿ, ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಸಲ್ಲಿಸಬೇಕಾಗಿರುತ್ತದೆ. ಅದರಂತೆ ಮುಖ್ಯ ಪಟ್ಟಿಯಲ್ಲಿನ ಅಭ್ಯರ್ಥಿಗಳು ವರದಿ ಮಾಡಿಕೊಳ್ಳದೆ ಇರುವ ಅಭ್ಯರ್ಥಿಗಳ ಮೀಸಲಾತಿ (ನೇರ ಮತ್ತು ಸಮಾನಾಂತರ ಮೀಸಲಾತಿ ಹಾಗೂ ಇತರೆ ವಿವರಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

3/3/14

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಹೊರಡಿಸಿದೆ
ದಿನಾಂಕ 4/4/14